# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು-572 103

ದೂರವಾಣಿ : 0816-2254546, 0816-2255596, 0816-2255597 ಫ್ಯಾಕ್ಸ್ :0816-2270719


ಸಂಖ್ಯೆ: ತುವಿ: ಅಭಿವೃದ್ಧಿ ವಿಭಾಗ:4392: 2018-19/4487 ದಿನಾಂಕ: 25.03.2019

-:ಸುತ್ತೋಲೆ:-

**ವಿಷಯ: "ಸೇವಾ ಸಿಂಧು"** ಯೋಜನೆಯಡಿ ಸೇರಿಸಿರುವ ನಾಗರೀಕ ಸೇವೆಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ತುಮಕೂರು ವಿಶ್ವವಿದ್ಯಾನಿಲಯ ವ್ಯಾಪ್ತಿಗೊಳಪಡುವ ಎಲ್ಲಾ ಕಾಲೇಜುಗಳಿಗೆ ತರಬೇತಿ ಕಾರ್ಯಕ್ರಮ ಆಯೋಜಿಸಿರುವ ಬಗ್ಗೆ.

**ಉಲ್ಲೇಖ:** 1. ತುಮಕೂರು ಜಿಲ್ಲಾಧಿಕಾರಿಗಳ ಸೂಚನಾ ಪತ್ರ ಅಟಲ್‌ಜೀ ಸಿ.ಆರ್.27/18-19 ದಿನಾಂಕ 21.03.2019

2.ಸಂಖ್ಯೆ: ತುವಿ: ಅಭಿವೃದ್ಧಿ ವಿಭಾಗ:4392: 2018-19/4366ದಿನಾಂಕ:18.03.2019

3. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 24.03.2019

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1)ರಲ್ಲಿ ಕರ್ನಾಟಕ ಸರ್ಕಾರದ ಇ-ಆಡಳಿತ ಇಲಾಖೆ ವತಿಯಿಂದ ಸೇವಾ ಸಿಂಧು ಯೋಜನೆಯಡಿ ತುಮಕೂರು ವಿಶ್ವವಿದ್ಯಾಲಯದ ವ್ಯಾಪ್ತಿಗೊಳಪಡುವ ಎಲ್ಲಾ ಕಾಲೇಜುಗಳು 04 ಸೇವೆಗಳನ್ನು ಸೇವಾ ಸಿಂಧು ತಂತ್ರಾಂಶದಲ್ಲಿ ಅಳವಡಿಸಿದ್ದು, ಸದರಿ ತಂತ್ರಾಂಶದ ಬಳಕೆ ಕುರಿತು ತರಬೇತಿಯನ್ನು ದಿನಾಂಕ 28.03.2019ರಂದು ಬೆಳಿಗ್ಗೆ 10.30 ಗಂಟೆಗೆ ಸರ್.ಎಂ.ವಿಶ್ವೇಶ್ವರಯ್ಯ ಸಭಾಂಗಣ, ತುಮಕೂರು ವಿಶ್ವವಿದ್ಯಾಲಯ, ತುಮಕೂರು ಇಲ್ಲಿ ಆಯೋಜಿಸಲಾಗಿದೆ. ಸದರಿ ತರಬೇತಿಗೆ ತಮ್ಮ ಕಾಲೇಜಿನ ವಿಷಯ ನಿರ್ವಾಹಕರು,ಅಧೀಕ್ಷಕರು ಮತ್ತು ಪಾಂಶುಪಾಲರು ತಪ್ಪದೇ ಕಡ್ಡಾಯವಾಗಿ ಹಾಜರಾಗುವಂತೆ ಮಾನ್ಯ ಜಿಲ್ಲಾಧಿಕಾರಿಗಳು ಉಲ್ಲೇಖಿತ ಸೂಚನಾ ಪತ್ರದಲ್ಲಿ ಸೂಚಿಸಿರುತ್ತಾರೆ.

ಸೇವಾ ಸಿಂಧು ಯೋಜನೆಯ 04 ಆನ್‌ಲೈನ್ ಸೇವೆಗಳ ವಿಷಯಕ್ಕೆ ಸಂಬಂಧಿಸಿದಂತೆ ತುಮಕೂರು ವಿಶ್ವವಿದ್ಯಾಲಯದ (ಉಲ್ಲೇಖ-2) ಸುತ್ತೋಲೆ ದಿನಾಂಕ 18.03.2019ರಲ್ಲಿ ತಿಳಿಸಲಾಗಿದೆ.

ದಿನಾಂಕ 28.03.2019ರಂದು ಬೆಳಿಗ್ಗೆ 10.30 ಗಂಟೆಗೆ ಸರ್.ಎಂ. ವಿಶ್ವೇಶ್ವರಯ್ಯ ಸಭಾಂಗಣ, ತುಮಕೂರು ವಿಶ್ವವಿದ್ಯಾಲಯ, ತುಮಕೂರು ಇಲ್ಲಿ ಜಿಲ್ಲಾಡಳಿತದಿಂದ ಆಯೋಜಿಸಲಾಗಿರುವ ಸೇವಾ ಸಿಂಧು ತರಬೇತಿಗೆ ತಮ್ಮ ಕಾಲೇಜಿನ ವಿಷಯ ನಿರ್ವಾಹಕರು, ಅಧೀಕ್ಷಕರು ಮತ್ತು ಪ್ರಾಂಶುಪಾಲರು ತಪ್ಪದೇ ಕಡ್ಡಾಯವಾಗಿ ಹಾಜರಾಗುವಂತೆ ಮಾನ್ಯ ಕುಲಪತಿಯವರ ಅನುಮೋದನೆಯ ಮೇರೆಗೆ ಈ ಮೂಲಕ ತಿಳಿಸಲಾಗಿದೆ. ತರಬೇತಿಗೆ ಹಾಜರಾಗುವ ಸಿಬ್ಬಂದಿಗಳಿಗೆ ತುಮಕೂರು ವಿಶ್ವವಿದ್ಯಾಲಯದಿಂದ ಯಾವುದೇ ಪ್ರಯಾಣ ಭತ್ಯೆ ಮತ್ತು ದಿನ ಭತ್ಯೆಯನ್ನು ಪಾವತಿಸುವುದಿಲ್ಲ.

25/03

ಕುಲಸಚಿವರು

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ:

1. ಪ್ರಾಂಶುಪಾಲರು, ತುಮಕೂರು ವಿಶ್ವವಿದ್ಯಾನಿಲಯ ವ್ಯಾಪ್ತಿಯ ಎಲ್ಲಾ ಘಟಕ ಮತ್ತು ಸಂಯೋಜಿತ ಕಾಲೇಜುಗಳು,

**ಪ್ರತಿಗಳು.**

1. ಕುಲಸಚಿವರು, ಪರೀಕ್ಷಾಂಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
2. ಆಪ್ತಕಾರ್ಯದರ್ಶಿಗಳು, ಜಿಲ್ಲಾಧಿಕಾರಿಗಳ ಕಾರ್ಯಾಲಯ, ತುಮಕೂರು.
3. ಮುಖ್ಯಸ್ಥರು, ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನ ವಿಭಾಗಗಳು, ತುಮಕೂರು ವಿಶ್ವವಿದ್ಯಾಲಯ, ತುಮಕೂರು(ಸಂಬಂಧಪಟ್ಟ ಸಿಬ್ಬಂದಿ/ಅಧಿಕಾರಿಗಳು ಭಾಗವಹಿಸಲು ಸೂಚಿಸಿದೆ)
4. ಸಿಸ್ಟಂ ಅನಾಲಿಸ್ಟ್, ಗಣಕಯಂತ್ರ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
   (ತುಮಕೂರು ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಬಿತ್ತರಿಸುಂತೆ ಸೂಚಿಸಿದೆ
5. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಕಚೇರಿ ಪ್ರತಿ